ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಕಲಬುರಗಿ ಕೇಂದ್ರೀಯ ವಿಶ್ವವಿದ್ಯಾಲಯದ ವಿಭಾಗಗಳು ಹಾಗೂ ಹುದ್ದೆಗಳ ಕುರಿತು

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):-

1416 (1716) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಕೌಶಾಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ಕೇಂದ್ರೀಯ ವಿಶ್ವವಿದ್ಯಾಲಯಕ್ಕೆ ಎಷ್ಟು ವಿಭಾಗಗಳು ಮಂಜೂರಾಗಿವೆ ;

(ಆ) ಎಲ್ಲಾ ವಿಭಾಗಗಳಿಗೆ ಎಷ್ಟು ಹುದ್ದೆಗಳು ಮಂಜೂರಾತಿಯಾಗಿವೆ; ಮಂಜೂರಾತಿಯಾದ ಎಲ್ಲಾ ಹುದ್ದೆಗಳು ಭರ್ತಿಯಾಗಿವೆಯೇ ಮತ್ತು ಇನ್ನೂ ಖಾಲಿ ಉಳಿದ ಹುದ್ದೆಗಳು ಎಷ್ಟು ; ಅವುಗಳನ್ನು ಭರ್ತಿ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಇದ್ದಲ್ಲಿ, ಯಾವಾಗ ಭರ್ತಿ ಮಾಡಲಾಗುವುದು ; (ಸಂಪೂರ್ಣ ವಿವರ ನೀಡುವುದು)

(ಇ) ಈ ವಿಶ್ವವಿದ್ಯಾಲಯಕ್ಕಾಗಿ 2019-2020ರವರೆಗೆ ಬಿಡುಗಡೆಯಾದ ಅನುದಾನ ಎಷ್ಟು ಇದರಲ್ಲಿ ಖರ್ಚಾದ ಅನುದಾನ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಈ) ಈ ವಿಶ್ವವಿದ್ಯಾಲಯದಲ್ಲಿ ರೋಸ್ಟರ್ ಪದ್ಧತಿ ಜಾರಿಯಲ್ಲಿದೆಯೇ; ಇದ್ದಲ್ಲಿ, ವಿಭಾಗವಾರು ವಿವರ ನೀಡುವುದು ?